ದೂರವಾಣಿ ಸಂಖ್ಯೆ: 2419277/2419210
ಫ್ಯಾಕ್ಸ್: 0821-3419363/24193011

e-mail registrar@Uni-mysore-ac-in
www.uni-mysore-ac-in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಯುಎ-3/184/2022-23

ದಿನಾಂಕ 16-11-2022

**"ಪ್ರಮಾಣಿತ ಅಂಚೆ ಮೂಲಕ"**

ಶಿಕ್ಷಣ ಮಂಡಳಿ ಸದಸ್ಯರುಗಳಿಗೆ,

ಮಾನ್ಯರೆ,

ವಿಷಯ: ದಿನಾಂಕ: 10-11-2022ರಂದು ನಡೆದ ಶಿಕ್ಷಣ ಮಂಡಳಿ ವಿಶೇಷ ಸಭೆಯ ನಡವಳಿಯನ್ನು ಕಳುಹಿಸುವ ಬಗ್ಗೆ.

* * * * *

ದಿನಾಂಕ:10-11-2022ರಂದು ಮಧ್ಯಾಹ್ನ 12-30 ಗಂಟೆಗೆ, ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನ, ಶಿಕ್ಷಣ ಮಂಡಳಿ ಸಭಾಂಗಣದಲ್ಲಿ ನಡೆದ, ಶಿಕ್ಷಣ ಮಂಡಳಿ ವಿಶೇಷ ಸಭೆಯ ನಡವಳಿಗಳ ಪ್ರತಿಯನ್ನು ತಮ್ಮ ಮಾಹಿತಿಗಾಗಿ ಈ ಮೂಲಕ ಕಳುಹಿಸಿಕೊಡಲಾಗಿದೆ, ನಡವಳಿಯಲ್ಲಿ ದಾಖಲಿಸಿರುವ ಯಾವುದೇ ಅಂಶದ ಯಥಾರ್ಥತೆಯ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಂದ ನಡವಳಿಗಳನ್ನು ಕಳುಹಿಸಿದ ದಿನಾಂಕದಿಂದ 21 ದಿನಗಳ ಒಳಗಾಗಿ ಆಕ್ಷೇಪಣೆ ಬಾರದಿದ್ದಲ್ಲಿ, ನಡವಳಿಯಲ್ಲಿ ದಾಖಲಿಸಿರುವ ಎಲ್ಲಾ ಅಂಶಗಳು ಸರಿಯಾಗಿವೆ ಎಂದು ಪರಿಗಣಿಸಲ್ಪಡುತ್ತವೆ, ಆದುದರಿಂದ. ನಡವಳಿಯ ಬಗ್ಗೆ ನಿಮ್ಮ ಆಕ್ಷೇಪಣೆ(ಗಳು) ಏನಾದರೂ ಇದ್ದಲ್ಲಿ, ಈ ಬಗ್ಗೆ "ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು" ಇವರನ್ನು ಉದ್ದೇಶಿಸಿ ಬರೆದ ಪತ್ರವನ್ನು ದಿನಾಂಕ: 08-12-2022ರ ಒಳಗಾಗಿ, ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು-570005 ಇವರಿಗೆ ನೇರವಾಗಿ ತಲುಪಿಸುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ

16/11/2022

ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಪ್ರತಿ:

1. ಗೌರವಾನ್ವಿತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – ಘನತೆವೆತ್ತ ರಾಜ್ಯಪಾಲರ ಅವಗಹಾನೆಗೆ ತರಬೇಕಾಗಿ ಕೋರಲಾಗಿದೆ.
2. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ವಿಶ್ವವಿದ್ಯಾನಿಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ನಿರ್ದೇಶಕರು, ಪಿ.ಎಂ.ಇ.ಬಿ/ ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ವಿದ್ಯಾರ್ಥಿಕ್ಷೇಮಪಾಲನ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
6. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು(ಶೈಕ್ಷಣಿಕ/ಆಡಳಿತ/ಅಭಿವೃದ್ಧಿ/ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.

AC Forwarding letter

# ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯದ ಶಿಕ್ಷಣ ಮಂಡಳಿ ಸಭಾಂಗಣದಲ್ಲಿ ದಿನಾಂಕ: 10-11-2022ರಂದು ಮಧ್ಯಾಹ್ನ 12.30ಗಂಟೆಗೆ ನಡೆದ ವಿದ್ಯಾವಿಷಯಕ ಪರಿಷತ್ ವಿಶೇಷ ಸಭೆಯ ನಡವಳಿ.

**ಸಭೆಗೆ ಹಾಜರಾಗಿದ್ದ ಸದಸ್ಯರುಗಳು:**

| | | |
|---|---|---|
| 1 | ಪ್ರೊ.ಜಿ.ಹೇಮಂತ್‌ಕುಮಾರ್<br>ಮಾನ್ಯ ಕುಲಪತಿಗಳು | ಅಧ್ಯಕ್ಷರು |
| 2 | ಡಾ. ಜಿ.ಗೋವಿಂದರಾಜು | ಸದಸ್ಯರು |
| 3 | ಡಾ. ನಿರ್ಮಲ.ಹೆಚ್.ಎಂ | ಸದಸ್ಯರು |
| 4 | ಡಾ. ವೆಂಕಟೇಶಯ್ಯ | ಸದಸ್ಯರು |
| 5 | ಡಾ. ಜಯಶಂಕರ್.ಎನ್ | ಸದಸ್ಯರು |
| 6 | ಪ್ರೊ. ಸೌಮ್ಯ ಈರಪ್ಪ.ಕೆ | ಸದಸ್ಯರು |
| 7 | ಶ್ರೀ ನಂದೀಶ್.ಎಸ್ | ಸದಸ್ಯರು |
| 8 | ಶ್ರೀ ಟಿ.ನಾಗರಾಜು | ಸದಸ್ಯರು |
| 9 | ಪ್ರೊ. ಕೆ.ವಿ.ಅಯ್ಯಣ್ಣ | ಸದಸ್ಯರು |
| 10 | ಶ್ರೀ ಹೆಚ್.ಪಿ.ಶಶಿಕುಮಾರ್ | ಸದಸ್ಯರು |
| 11 | ಡಾ.ಭಾಗ್ಯಲಕ್ಷ್ಮಿ | ಸದಸ್ಯರು |
| 12 | ಡಾ.ಬಿಂದು ಅನಿಲ್ ಥಾಮಸ್ | ಸದಸ್ಯರು |
| 13 | ಶ್ರೀ ಶಿವಕುಮಾರ್.ಎಂ | ಸದಸ್ಯರು |
| 14 | ಶ್ರೀ ಎಂ.ಸಿ.ರಾಜಶೇಖರ್ | ಸದಸ್ಯರು |
| 15 | ಪ್ರೊ. ಹೆಚ್.ರಾಜಶೇಖರ್ | ಸದಸ್ಯರು |
| 16 | ಪ್ರೊ. ಮುಜಾಫರ್ ಹೆಚ್‌ಅಸ್ಸಾದಿ | ಸದಸ್ಯರು |
| 17 | ಪ್ರೊ. ಹೆಚ್.ಟಿ.ಬಸವರಾಜಪ್ಪ | ಸದಸ್ಯರು |
| 18 | ಪ್ರೊ. ಟಿ.ಆರ್.ಮಾರುತಿ | ಸದಸ್ಯರು |
| 19 | ಪ್ರೊ. ಎಸ್.ಮದಿಅಳಗನ್ | ಸದಸ್ಯರು |
| 20 | ಪ್ರೊ. ಬಿ.ಶಂಕರ್ | ಸದಸ್ಯರು |
| 21 | ಪ್ರೊ. ವೈ.ಬಿ.ಬಸವರಾಜು | ಸದಸ್ಯರು |
| 22 | ಡಾ. ಮಲ್ಲಿನಾಥ್ ಕುಂಬಾರ್ | ಸದಸ್ಯರು |
| 23 | ಡಾ. ಸರಸ್ವತಿ, ಗ್ರಂಥಪಾಲಕರು, | ಸದಸ್ಯರು |
| 24 | ಡಾ.ಬಿ.ಎಸ್.ಚಂದ್ರಶೇಖರ್, ನಿರ್ದೇಶಕರು (ಪ್ರಭಾರ),<br>ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, | ಸದಸ್ಯರು |
| 25 | ಪ್ರೊ. ಎನ್.ಕೆ.ಲೋಕನಾಥ್, ನಿರ್ದೇಶಕರು, ಪಿ.ಎಂ.ಇ.ಬಿ<br>ಹಾಗೂ ನಿರ್ದೇಶಕರು (ಪ್ರಭಾರ). ಕಾಲೇಜು ಅಭಿವೃದ್ಧಿ ಮಂಡಳಿ. | ಸದಸ್ಯರು |
| 26 | ಡಾ. ಕೃಷ್ಣಯ್ಯ, ನಿರ್ದೇಶಕರು (ಪ್ರಭಾರ), ದೈಹಿಕ ಶಿಕ್ಷಣ ವಿಭಾಗ | ಸದಸ್ಯರು |
| 27 | ಡಾ. ಸಂಗೀತ ಗಜಾನನ ಭಟ್, ಹಣಕಾಸು ಅಧಿಕಾರಿಗಳು | ಸದಸ್ಯರು |
| 28 | ಕುಮಾರಿ ಅನುಷಾ.ಪಿ.ಜಿ | ಸದಸ್ಯರು |
| 29 | ಕುಮಾರಿ ಮುಸ್ಕನ್ ಭಾನು | ಸದಸ್ಯರು |
| 30 | ಶ್ರೀ ರೋಹನ್.ವಿ | ಸದಸ್ಯರು |
| 31 | ಶ್ರೀ ಉದಯ್.ಎಂ.ಎಲ್ | ಸದಸ್ಯರು |
| 32 | ಪ್ರೊ. ಶಿವಪ್ಪ.ಆರ್ | ಕುಲಸಚಿವ ಹಾಗೂ ಸದಸ್ಯ ಕಾರ್ಯದರ್ಶಿ |

**ಸಭೆಯಲ್ಲಿ ಗೈರು ಹಾಜರಾಗಿದ್ದವರು:**

| | | |
|---|---|---|
| 1 | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ,<br>ಕರ್ನಾಟಕ ಸರ್ಕಾರ ಇವರ ಪರವಾಗಿ<br>ಡಾ.ಗಿರಿಧರ್‌ರಾವ್.ಎಂ.ಎಸ್, ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ,<br>ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 2 | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು. | ಸದಸ್ಯರು |
| 3 | ಶ್ರೀ ಸಿ.ಎಸ್.ನಿರಂಜನ್ ಕುಮಾರ್, ಎಂ.ಎಲ್.ಎ | ಸದಸ್ಯರು |
| 4 | ಶ್ರೀ ಪ್ರೀತಂಜೆಗೌಡ, ಎಂ.ಎಲ್.ಎ | ಸದಸ್ಯರು |
| 5 | ಶ್ರೀ ಎಂ.ಶ್ರೀನಿವಾಸ್, ಎಂ.ಎಲ್.ಎ | ಸದಸ್ಯರು |
| 6 | ಶ್ರೀ ಎಲ್.ನಾಗೇಂದ್ರ, ಎಂ.ಎಲ್.ಎ | ಸದಸ್ಯರು |
| 7 | ಶ್ರೀಸಿ.ಎನ್. ಮಂಜೆಗೌಡ, ಎಂ.ಎಲ್.ಸಿ | ಸದಸ್ಯರು |
| 8 | ಶ್ರೀ ಎಂ.ಪಿ.ಕುಶಾಲಪ್ಪ, ಎಂ.ಎಲ್.ಸಿ | ಸದಸ್ಯರು |
| 9 | ಶ್ರೀಮತಿ ನಾಗರತ್ನಮ್ಮ.ಕೆ | ಸದಸ್ಯರು |
| 10 | ಶ್ರೀ ಹೆಚ್.ಎಸ್.ಗಂಗೇಗೌಡ | ಸದಸ್ಯರು |
| 11 | ಡಾ. ಪ್ರಶಾಂತ್.ಎಸ್.ಟಿ | ಸದಸ್ಯರು |
| 12 | ಪ್ರೊ. ಎಂ.ಎಸ್.ಶೇಖರ್ | ಸದಸ್ಯರು |
| 13 | ಪ್ರೊ. ಜಿ.ಆರ್.ಜನಾರ್ಧನ | ಸದಸ್ಯರು |
| 14 | ಪ್ರೊ. ಎ.ಪಿ.ಜ್ಞಾನಪ್ರಕಾಶ್, ಕುಲಸಚಿವ (ಪರೀಕ್ಷಾಂಗ) | ಸದಸ್ಯರು |
| 15 | ಕುಮಾರಿ ಅನು.ಎಸ್.ಜೆ | ಸದಸ್ಯರು |
| 16 | ಶ್ರೀ ಎಂ.ಪವನ್‌ಕುಮಾರ್ | ಸದಸ್ಯರು |

ಮಾನ್ಯ ಕುಲಪತಿಗಳು ಶಿಕ್ಷಣ ಮಂಡಳಿಯ ವಿಶೇಷ ಸಭೆಗೆ ಹಾಜರಾಗಿರುವ ಎಲ್ಲಾ ಸದಸ್ಯರುಗಳನ್ನು ಸಭೆಗೆ ಹೃತ್ಪೂರ್ವಕವಾಗಿ ಸ್ವಾಗತಿಸಿದರು.

ನಂತರ, ಮಾನ್ಯ ಕುಲಸಚಿವರು ಶಿಕ್ಷಣ ಮಂಡಳ ವಿಶೇಷ ಸಭೆಗೆ ಆಗಮಿಸಿರುವ ಎಲ್ಲಾ ಸದಸ್ಯರುಗಳನ್ನೂ ಮತ್ತೊಮ್ಮೆ ಹೃತ್ಪೂರ್ವಕವಾಗಿ ಸ್ವಾಗತಿಸುತ್ತಾ, ಹೊಸದಾಗಿ ವಿದ್ಯಾರ್ಥಿ ಕ್ಷೇಮಪಾಲನಾ (ಪ್ರಭಾರ), ನಿರ್ದೇಶಕರಾಗಿ ಹಾಗೂ ಶಿಕ್ಷಣ ಮಂಡಳ ಸದಸ್ಯರಾಗಿ ನೇಮಕಗೊಂಡಿರುವ ಡಾ.ಬಿ.ಎಸ್.ಚಂದ್ರಶೇಖರ್, ಪ್ರಾಧ್ಯಾಪಕರು, ಅರ್ಥಶಾಸ್ತ್ರ ಮತ್ತು ಸಹಕಾರ ವಿಭಾಗ, ಮಹಾರಾಜ ಕಾಲೇಜು, ಮೈಸೂರು ಇವರನ್ನು ಸಭೆಗೆ ಸ್ವಾಗತಿಸಿ ಪರಿಚಯಿಸಿದರು.

ಹಾಗೂ

ಇದುವರೆವಿಗೂ ಶಿಕ್ಷಣ ಮಂಡಳಿ ಸದಸ್ಯರಾಗಿ ಸೇವೆ ಸಲ್ಲಿಸಿ ನಿರ್ಗಮಿಸಿರುವ ಪ್ರೊ. ಗುರುಸಿದ್ದಯ್ಯ, ನಿರ್ದೇಶಕರು (ಪ್ರಭಾರ), ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು ಇವರ ಸೇವೆಯನ್ನು ಸ್ಮರಿಸಿ ದಾಖಲಿಸಲಾಯಿತು.

ನಂತರ ಕುಲಪತಿಯವರು ಕಾರ್ಯಸೂಚಿಯಂತೆ ವಿಷಯವನ್ನು ಸಭೆಯ ಮುಂದೆ ಮಂಡಿಸಿದರು.

| ವಿಷಯಸಂಖ್ಯೆ | ವಿಷಯ ಸಂಕ್ಷಿಪ್ತವಾಗಿ |
|---|---|
| I.1 | ದಿನಾಂಕ:29-08-2022ರಂದು ಜರುಗಿದ ಶಿಕ್ಷಣ ಮಂಡಳ ವಿಶೇಷ ಸಭೆಯ ನಡವಳಿಯನ್ನು ದೃಢೀಕರಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 29-08-2022ರಂದು ಜರುಗಿದ ಶಿಕ್ಷಣ ಮಂಡಳ ವಿಶೇಷ ಸಭೆಯ ನಡವಳಿಯನ್ನು ದೃಢೀಕರಿಸಲಾಯಿತು.. |
| I.2 | ದಿನಾಂಕ:23-09-2022ರಂದು ಜರುಗಿದ ಶಿಕ್ಷಣ ಮಂಡಳ ಎರಡನೇ ಸಾಮಾನ್ಯ ಸಭೆಯ ನಡವಳಿಯನ್ನು ದೃಢೀಕರಿಸುವ ಬಗ್ಗೆ. |
| ತೀರ್ಮಾನ | ದಿನಾಂಕ:23-09-2022ರಂದು ಜರುಗಿದ ಶಿಕ್ಷಣ ಮಂಡಳ ಎರಡನೇ ಸಾಮಾನ್ಯ ಸಭೆಯ ನಡವಳಿಯನ್ನು ದೃಢೀಕರಿಸಲಾಯಿತು. |
| I.1 | 2018-19ನೇ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪರಿಶೋಧನಾ ವರದಿಯ ಆಕ್ಷೇಪಣೆಗಳಿಗೆ ಅನುಪಾಲನಾ ವರದಿ. |
| ತೀರ್ಮಾನ | 2018-19ನೇ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ವಾರ್ಷಿಕ ಲೆಕ್ಕಪರಿಶೋಧನಾ ವರದಿಯ ಆಕ್ಷೇಪಣೆಗಳಿಗೆ ವಿಶ್ವವಿದ್ಯಾನಿಲಯದ ವತಿಯಿಂದ ಸಿದ್ದಪಡಿಸಲಾಗಿರುವ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಕಳುಹಿಸಲು ವಿದ್ಯಾ ವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |

**<u>ಇತರೆ ವಿಷಯಗಳು:</u>**

1. ಶ್ರೀ ಹೆಚ್.ಪಿ.ಶಶಿಕುಮಾರ್‌ರವರು, ಮಾತನಾಡಿ ಬೇರೆ ವಿಶ್ವವಿದ್ಯಾನಿಲಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ರಡಿಯಲ್ಲಿ ಸ್ನಾತಕ ಪದವಿ ಪರೀಕ್ಷೆ ಬರೆಯಲು ಎರಡೂವರೆ ಗಂಟೆ ಸಮಯ ನೀಡಲಾಗುತ್ತಿದೆ. ಆದರೆ ನಮ್ಮ ವಿಶ್ವವಿದ್ಯಾನಿಲಯದಲ್ಲಿ ಎರಡು ಗಂಟೆಗಳ ಕಾಲಾವಕಾಶ ನೀಡುತ್ತಿರುವುದು ತಿಳಬಂದಿರುತ್ತದೆಂದು ಸಭೆಯ ಗಮನಕ್ಕೆ ತಂದರು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನಮ್ಮ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೂ ಸಹ ಪರೀಕ್ಷೆ ಬರೆಯಲು ಎರಡೂವರೆ ಗಂಟೆ ಸಮಯ ನೀಡಬೇಕೆಂದು ತಿಳಿಸಿದರು. ಇದಕ್ಕುತ್ತರವಾಗಿ ಮಾನ್ಯ ಕುಲಪತಿಗಳು ಮಾತನಾಡಿ, ರಾಷ್ಟ್ರೀಯ ಶಿಕ್ಷಣ ನೀತಿ 2020ರ ನಿಯಮದಲ್ಲಿ ಸ್ನಾತಕ ಪದವಿ ಪರೀಕ್ಷೆ ಬರೆಯಲು ಎರಡು ಗಂಟೆಗಳ ಕಾಲಾವಕಾಶ ನಿಗಧಿಯಾಗಿರುತ್ತದೆ. ಸದಸ್ಯರ ಕೋರಿಕೆಯಂತೆ, ಕಾಲೇಜು ಅಭಿವೃದ್ಧಿ ಮಂಡಳಯ ನಿರ್ದೇಶಕರು ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳ ಸಭೆಯನ್ನು ಕರೆದು ಸದರಿ ವಿಷಯವನ್ನು ಮಂಡಿಸಿ ಪರೀಕ್ಷೆ ಅವಧಿಯನ್ನು ಎರಡೂವರೆ ಗಂಟೆ ನಿಗಧಿ ಪಡಿಸಲು ಸೂಚಿಸಿದರು.

2. ಶ್ರೀ ಟಿ.ನಾಗರಾಜುರವರು ಮಾತನಾಡಿ, ಕಾಲೇಜುಗಳಿಗೆ ಸಂಯೋಜನೆ ನೀಡುವ ಸ್ಥಾಯಿ ಸಮಿತಿಯಲ್ಲಿ ವಿದ್ಯಾ ವಿಷಯಕ ಪರಿಷತ್ ಸದಸ್ಯರುಗಳನ್ನು ಸಹ ಸೇರ್ಪಡೆಗೊಳಸಬೇಕೆಂದು ಮನವಿ ಮಾಡಿಕೊಂಡಿದ್ದರೂ ಸಹ ಇದುವರೆವಿಗೂ ಕಾರ್ಯಗತಗೊಂಡಿಲ್ಲವೆಂದು ಸಭೆಯ ಗಮನಕ್ಕೆ ತಂದರು, ಇದಕ್ಕುತ್ತರವಾಗಿ ಮಾನ್ಯ ಕುಲಪತಿಗಳು ಮಾತನಾಡಿ, ಕಾಲೇಜುಗಳಿಗೆ ಸಂಯೋಜನೆ ನೀಡುವ ಸ್ಥಾಯಿ ಸಮಿತಿಯಲ್ಲಿ ವಿದ್ಯಾ ವಿಷಯಕ ಪರಿಷತ್ ಸದಸ್ಯರನ್ನು ಸೇರ್ಪಡೆಗೊಳಸಲು ಈಗಾಗಲೇ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದರು ಇದಕ್ಕುತ್ತರವಾಗಿ ಶ್ರೀ.ಟಿ.ನಾಗರಾಜುರವರು ಮಾತನಾಡಿ, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಅನುಮೋದನೆ ಪಡೆಯುವ ಅವಶ್ಯಕತೆ ಇರುವುದಿಲ್ಲ, ಸರ್ಕಾರದ ಸುತ್ತೋಲೆಯಲ್ಲಿ ವಿದ್ಯಾ ವಿಷಯಕ ಪರಿಷತ್ ಸದಸ್ಯರುಗಳನ್ನು ಸೇರ್ಪಡೆಗೊಳಸಬಹುದೆಂದಿರುತ್ತದೆಂದು ತಿಳಿಸಿದರು. ಮಾನ್ಯ ಕುಲಪತಿಗಳು ಮಾತನಾಡಿ, ಇನ್ನುಮುಂದೆ ಸ್ಥಾಯಿ ಸಮಿತಿ ರಚಿಸುವಾಗ ಸರ್ಕಾರದಿಂದ ನಾಮನಿರ್ದೇಶನಗೊಂಡಿರುವ ಸದಸ್ಯರುಗಳನ್ನು ಸಹ ಸ್ಥಾಯಿ ಸಮಿತಿಯಲ್ಲಿ ಸೇರ್ಪಡೆಗೊಳಸಲು ಸೂಚಿಸಿದರು.

ಮಾನ್ಯ ಕುಲಪತಿಗಳು ಮಾತನಾಡಿ, ದಿನಾಂಕ:15-11-2022 ರಂದು, ವಿಶ್ವವಿದ್ಯಾನಿಲಯದ ಕುಲಪತಿಗಳ ಅಧಿಕಾರವಾಧಿಯು ಕೊನೆಗೊಳ್ಳುತ್ತಿರುವುದನ್ನು ಸಭೆಗೆ ತಿಳಸುತ್ತಾ, ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ಸುಮಾರು 12 ರಿಂದ 15 ವಿದ್ಯಾ ವಿಷಯಕ ಸಭೆಯ ಅಧ್ಯಕ್ಷನ್ನಾಗಿ ಸೇವೆ ಸಲ್ಲಿಸಿದ್ದು, ವಿಶ್ವವಿದ್ಯಾನಿಲಯದ ಪ್ರಗತಿಗೆ ಹಾಗೂ ಶೈಕ್ಷಣಿಕ ವಿಷಯಕ್ಕೆ ಸಂಬಂಧಿಸಿದಂತೆ ಸಭೆಗಳಲ್ಲಿ ನಿರ್ಧಾರ, ನಿರ್ಣಯಗಳನ್ನು ತೆಗೆದುಕೊಳ್ಳುವುದಕ್ಕೆ ಸಹಕರಿಸಿದ ಎಲ್ಲಾ ಸದಸ್ಯರಿಗೂ ಕೃತಜ್ಞತೆಗಳನ್ನು ಸಲ್ಲಿಸಿದರು,

ಪ್ರೊ. ಹೆಚ್. ರಾಜಶೇಖರ್, ಡೀನರು ವಾಣಿಜ್ಯ ನಿಕಾಯ, ಡಾ. ಸಂಗೀತ ಗಜಾನನ ಭಟ್, ಹಣಕಾಸು ಅಧಿಕಾರಿಗಳು, ಪ್ರೊ. ಮುಜಾಫರ್ ಹೆಚ್ ಅಸ್ಸಾದಿ, ಡೀನರು ಕಲಾ ನಿಕಾಯ, ಪ್ರೊ. ಬಿ. ಶಂಕರ್, ಡೀನರು, ಸ್ಕೂಲ್ ಆಫ್ ಇಂಜಿನಿಯರಿಂಗ್ ನಿಕಾಯ, ಶ್ರೀ ಹೆಚ್.ಪಿ.ಶಶಿಕುಮಾರ್, ಪ್ರೊ. ಕೆ.ವಿ.ಅಯ್ಯಣ್ಣ, ಡಾ. ಕೃಷ್ಣಯ್ಯ, ಡಾ. ವೆಂಕಟೇಶಯ್ಯ ಹಾಗೂ ಡಾ. ಸರಸ್ವತಿ, ಗ್ರಂಥಪಾಲಕರು ಇವರುಗಳು ಮಾತನಾಡಿ, ಮಾನ್ಯ ಕುಲಪತಿಗಳು ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ವಿಶ್ವವಿದ್ಯಾನಿಲಯದ ಬೆಳವಣಿಗೆಗೆ ಪ್ರಮುಖ ಪಾತ್ರವಹಿಸಿರುತ್ತಾರೆ. ಇವರು ವಿದ್ಯಾರ್ಥಿಗಳ ಸ್ನೇಹಜೀವಿಯಾಗಿ, ಅಧ್ಯಾಪಕರುಗಳಿಗೆ ಸಕಾರಾತ್ಮಕವಾಗಿ ಸಲಹೆ ಸೂಚನೆಗಳನ್ನು ನೀಡುತ್ತಿದ್ದರು. ಹಾಗೂ ಸಭೆಯಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳನ್ನು ಸ್ಮರಿಸುತ್ತಾ ಮುಂದಿನ ದಿನಗಳಲ್ಲೂ ಸಹ ವಿಶ್ವವಿದ್ಯಾನಿಲಯದ ಅಭಿವೃದ್ಧಿಗಾಗಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಕೋರಿದರು.

ನಂತರ, ಕುಲಪತಿಗಳ ಹುದ್ದೆಯಿಂದ ನಿವೃತ್ತರಾಗುತ್ತಿರುವ ಮಾನ್ಯ ಕುಲಪತಿಗಳು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಗಳನ್ನು ಮಾನ್ಯ ಕುಲಸಚಿವರು ಸಭೆಯ ಗಮನಕ್ಕೆ ತಂದರು.

1. ಕೋವಿಡ್-19 ಸಂದರ್ಭದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020ಕ್ಕೆ ಸಂಬಂಧಿಸಿದಂತೆ ಪಠ್ಯಕ್ರಮಗಳ ರೂಪುರೇಷೆಗಳನ್ನು ಸಿದ್ಧಪಡಿಸುವ ಕಾರ್ಯದಲ್ಲಿ ಆನ್‌ಲೈನ್ ಮುಖಾಂತರ ಇವರ ಅಧ್ಯಕ್ಷತೆಯಲ್ಲಿ 3 ರಿಂದ 4 ಕುಲಪತಿಗಳ ಸಮ್ಮುಖದಲ್ಲಿ ಸಭೆಗಳನ್ನು ನಡೆಸಿ ಪಠ್ಯಕ್ರಮಗಳ ರೂಪುರೇಷೆಗಳನ್ನು ಸಿದ್ಧಪಡಿಸಲಾಯಿತು.

2. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯ ಸರ್ಕಾರದ ಸಹಕಾರದೊಂದಿಗೆ ರಾಷ್ಟ್ರೀಯ ಶಿಕ್ಷಣ ನೀತಿ 2020ರಡಿಯಲ್ಲಿ ಸ್ನಾತಕ ಪದವಿಗೆ ರಾಷ್ಟ್ರೀಯ ಶಿಕ್ಷಣ ನೀತಿ ಮೊಟ್ಟ ಮೊದಲ ಬಾರಿಗೆ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅನುಷ್ಠಾನಗೊಳಿಸಲಾಯಿತು.
3. ಸ್ಕೂಲ್ ಆಫ್ ಇಂಜಿನಿಯರಿಂಗ್ ಕಾಲೇಜ್ ಅನ್ನು ಪ್ರಾರಂಭಿಸಲಾಯಿತು.
4. ಫಾರ್ಮಸಿ ಕಾಲೇಜು ಸ್ಥಾಪಿಸಲು ಕ್ರಮ ಕೈಗೊಳ್ಳಲಾಯಿತು.
5. ವಿಶ್ವವಿದ್ಯಾನಿಲಯದ ಜೇಷ್ಠತೆಯ ಆಧಾರದ ಮೇರೆಗೆ ಸುಮಾರು 650 ಸಾತ್ನಕ/ಸ್ನಾತಕೋತ್ತರ ಅಧ್ಯಾಪಕರಿಗೆ ಪದೋನ್ನತಿ ನೀಡಲಾಯಿತು.
6. ಎಲ್ಲಾ ವರ್ಗದ ಸಂಶೋಧನಾ ವಿದ್ಯಾರ್ಥಿಗಳ ಕುಂದು ಕೊರತೆಗೆ ಸಕಾರಾತ್ಮಕವಾಗಿ ಸ್ಪಂಧಿಸಿಕೊಂಡು ಬಂದಿರುತ್ತಾರೆ. ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನೂತನವಾಗಿ ವಿದ್ಯಾರ್ಥಿನಿಲಯವನ್ನು ಸಹ ಸ್ಥಾಪಿಸಲಾಯಿತು.
7. ಹಿಂದುಳಿದ ವರ್ಗಗಳ ಘಟಕವನ್ನು ಪುನರುಜ್ಜೀವನ ಗೊಳಿಸಿ, ಪ್ರಥಮ ಬಾರಿಗೆ ಆರ್ಥಿಕವಾಗಿ ಹಿಂದುಳಿದ ಸುಮಾರು 44 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲಾಯಿತು.
8. ಚಾಮರಾಜನಗರದಲ್ಲಿ ವಿಶ್ವವಿದ್ಯಾನಿಲಯದ ಸ್ಥಾಪನೆ ಮಾಡುವುದಕ್ಕೆ ಇವರ ಅಧ್ಯಕ್ಷತೆಯಲ್ಲಿ ಸಲಹೆ ಸೂಚನೆಯನ್ನು ನೀಡಿ ಸರ್ಕಾರಕ್ಕೆ ವರದಿಯನ್ನು ಕಳುಹಿಸಿ ಕೊಡುವಲ್ಲಿ ಪ್ರಮುಖ ಪಾತ್ರವಹಿಸಿರುತ್ತಾರೆ.
9. ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ 500 ಎಂಬಿಪಿಎಸ್ ಸ್ಪೀಡ್ ಹೊಂದಿರುವ ವೈಫೈ ಹಾಗೂ ಹೆಚ್ಚಿನ ಗಣಕಯಂತ್ರಗಳ ಸೌಲಭ್ಯವನ್ನು ಕಲ್ಪಿಸಲಾಯಿತು.
10. ವಿಶ್ವದ ಹಲವು ಸಂಸ್ಥೆಗಳ ಸಹಯೋಗದೊಂದಿಗೆ ತಾಂತ್ರಿಕ, ಶೈಕ್ಷಣಿಕ ಹಾಗೂ ಸಂಶೋಧನೆಗಳಿಗೆ ಸಂಬಂಧಿಸಿದಂತೆ ಒಡಂಬಡಿಕೆಗಳನ್ನು ಮಾಡಿಕೊಳ್ಳಲಾಯಿತು.
11. ಅಧ್ಯಾಪಕರು/ಅಧ್ಯಾಪಕೇತರ ವರ್ಗದವರಿಗೆ ಸರ್ಕಾರದಿಂದಲೇ ಹೆಚ್‌ಆರ್‌ಎಂಎಸ್ ಮೂಲಕ ವೇತನ ಪಾವತಿಸುವ ವ್ಯವಸ್ಥೆಯನ್ನು ಕಲ್ಪಿಸಲಾಯಿತು.
12. ಪ್ಲಾನಿಟೋರಿಯಂ ಸ್ಥಾಪನೆಗಾಗಿ ಕ್ರಮಕ್ಕೈಗೊಳ್ಳಲಾಯಿತು.
13. ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (Unified University College Management System- UUCMS) ಸರ್ಕಾರದ ವತಿಯಿಂದ ಅಭಿವೃದ್ಧಿ ಪಡಿಸಲು ವಿಶ್ವವಿದ್ಯಾನಿಲಯದ ಪರವಾಗಿ ನಮ್ಮ ಪ್ರಾಧ್ಯಾಪಕರು ಸಲಹೆ ಸೂಚನೆ ನೀಡುವುದಕ್ಕೆ ಮಾನ್ಯ ಕುಲಪತಿಗಳು ಕಾರಣಕರ್ತರಾಗಿದ್ದಾರೆ.
14. ವಿಶ್ವವಿದ್ಯಾನಿಲಯದ ಇತಿಹಾಸದಲ್ಲಿ ಮಹಾರಾಜ ಕಾಲೇಜಿನ ಮೈದಾನದಲ್ಲಿ 32 ಸಾವಿರ ವಿದ್ಯಾರ್ಥಿಗಳೊಂದಿಗೆ 75ನೇ ಆಜಾದಿ ಕಾ ಅಮೃತ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.
15. ಸರ್ಕಾರದ ಶಿಫಾರಸ್ಸಿನಂತೆ ಮೂರು ಘಟಕ ಕಾಲೇಜುಗಳನ್ನು ವಿಶ್ವವಿದ್ಯಾನಿಲಯಕ್ಕೆ ಸೇರ್ಪಡೆಗೊಳಿಸಲಾಯಿತು ಇಂತಹ ಸಂದರ್ಭದಲ್ಲಿ ಹಲವು ಸಮಸ್ಯೆಗಳು ಉದ್ಭವಿಸಿದ್ದರೂ ಸಹ ಧೃತಿಗೆಡದೆ ನಾಲ್ಕು ವರ್ಷದ ಅವಧಿಯಲ್ಲಿ ಉತ್ತಮ ಸೇವೆಯನ್ನು ಸಲ್ಲಿಸಿರುತ್ತಾರೆ.
16. ಕರ್ನಾಟಕ ಸರ್ಕಾರದ ನೀತಿಯಾನುಸಾರ, ವಿಶ್ವವಿದ್ಯಾನಿಲಯದ ಎಲ್ಲಾ ಸಿಬಂದ್ದಿ ವರ್ಗದವರಿಗೆ ಗಣಕಯಂತ್ರದ ತರಬೇತಿ ನೀಡಿ, ಇ-ಆಫೀಸ್‌ಅನ್ನು ಜಾರಿಗೆ ತರಲಾಗಿದೆ.

ಒಟ್ಟಾರೆಯಾಗಿ, ವಿಶ್ವವಿದ್ಯಾನಿಲಯಕ್ಕೆ ಕುಲಪತಿಗಳು ಸಲ್ಲಿಸಿರುವ ಸೇವೆಯನ್ನು ಸದಾ ಸ್ಮರಿಸಲಾಗುತ್ತದೆ ಎಂದು ತಿಳಿಸುತ್ತಾ, ವಿಶ್ವವಿದ್ಯಾನಿಲಯದ ಪರವಾಗಿ ಮಾನ್ಯ ಕುಲಪತಿಯವರಿಗೆ ಧನ್ಯವಾದಗಳನ್ನು ಅರ್ಪಿಸಿದರು.

ಅಂತಿಮವಾಗಿ, ಕುಲಸಚಿವರು ಸಭೆಯಲ್ಲಿ ಸಲಹೆ ಸೂಚನೆಗಳನ್ನು ನೀಡಿದಂತಹ ಎಲ್ಲಾ ಶಿಕ್ಷಣ ಮಂಡಳಿ ಸದಸ್ಯರುಗಳಿಗೆ ಹಾಗೂ ಅಧಿಕಾರಿ ವರ್ಗದವರಿಗೆ ವಂದನೆಗಳನ್ನು ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
ಕುಲಸಚಿವ ಹಾಗೂ ಸದಸ್ಯ ಕಾರ್ಯದರ್ಶಿ

ಸಹಿ/-
ಅಧ್ಯಕ್ಷರು ಹಾಗೂ ಮಾನ್ಯ ಕುಲಪತಿಗಳು